## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕಲಬುರಗಿ ವಿಮಾನ ನಿಲ್ದಾಣದ ವಿದ್ಯುಚ್ಚಕ್ತಿ ಬಿಲ್ಲಿನ ಮೊತ್ತ ಪಾವತಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1. ರಾಜ್ಯ ಸರ್ಕಾರವು ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರದೊಂದಿಗೆ ಮಾಡಿಕೊಂಡಿರುವ ಒಡಂಬಡಿಕೆ ದಿನಾಂಕ: 24.08.2019.
2. ಸರ್ಕಾರದ ಪತ್ರ ಸಂಖ್ಯೆ: ಮೂಅಇ 35 ರಾಅವಿ 2021, ದಿನಾಂಕ:26.10.2021.
3. ವ್ಯವಸ್ಥಾಪಕ ನಿರ್ದೇಶಕರು, ಕೆಎಸ್ಐಐಡಿಸಿ, ಇವರ ಪತ್ರ ಸಂಖ್ಯೆ:ಐಪಿಡಿ/41-4/1791/2021-22, ದಿನಾಂಕ: 19.01.2022.
4. ಸರ್ಕಾರದ ಆದೇಶ ಸಂಖ್ಯೆ: ಐಡಿಡಿ 22 ಯುಐಪಿ 2020, ದಿನಾಂಕ: 15.04.2021.
5. ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 142 ವೆಚ್ಚ-1/2021, ದಿನಾಂಕ: 13.12.2022.

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಕಲಬುರಗಿ ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ದಿನಾಂಕ:24.08.2019 ರಂದು ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರದೊಂದಿಗೆ ಮಾಡಿಕೊಂಡಿರುವ ಒಪ್ಪಂದದ ಷರತ್ತು B, (a). (iv) ರಲ್ಲಿ ಕಾರ್ಯಾಚರಣೆಯ ನಷ್ಟವನ್ನು ಕಡಿಮೆ ಮಾಡಲು ವಿಮಾನ ನಿಲ್ದಾಣವನ್ನು ಸ್ವಾಧೀನಕ್ಕೆ ತೆಗೆದುಕೊಂಡ ದಿನಾಂಕದಿಂದ ಮೊದಲ 10 ವರ್ಷಗಳ ಅವಧಿಗೆ ರಾಜ್ಯ ಸರ್ಕಾರವು ಉಚಿತವಾಗಿ ವಿದ್ಯುತ್ ಮತ್ತು ನೀರು ಸರಬರಾಜನ್ನು ಒದಗಿಸಬೇಕಾಗಿರುತ್ತದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ:(2) ರ ಪತ್ರದಲ್ಲಿ ದಿನಾಂಕ:01/01/2020 ರಿಂದ ದಿನಾಂಕ: 31/08/2021ರ ವರೆಗಿನ ಅವಧಿಗೆ, ವಿದ್ಯುತ್ ಬಳಕೆಗೆ ತಗುಲಿರುವ ಒಟ್ಟು ಮೊತ್ತ ರೂ.1,88,89,200/- ಗಳನ್ನು ಆರ್.ಸಿ.ಎಸ್ ಲೆಕ್ಕ ಶೀರ್ಷಿಕೆಯಡಿಯಲ್ಲಿ (ಲೆಕ್ಕ ಶೀರ್ಷಿಕೆ: 3451-00-090-1-18-059 ಪ್ರಾದೇಶಿಕ ವಾಯು ಸಂಪರ್ಕ - ಇತರೆ ಖರ್ಚುಗಳು) ಲಭ್ಯವಿರುವ ಅನುದಾನದಲ್ಲಿ ಬರಿಸುವಂತೆ ವ್ಯವಸ್ಥಾಪಕ ನಿರ್ದೇಶಕರು ಕೆಎಸ್ಐಐಡಿಸಿ ನಿಯಮಿತ ಇವರಿಗೆ ತಿಳಿಸಲಾಗಿರುತ್ತದೆ.

3. ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ವ್ಯವಸ್ಥಾಪಕ ನಿರ್ದೇಶಕರು, ಕೆಎಸ್ಐಐಡಿಸಿ ನಿಯಮಿತ ಇವರ ಪತ್ರದಲ್ಲಿ ಕಲಬುರಗಿ ವಿದ್ಯುಚ್ಚಕ್ತಿ ಸರಬರಾಜು ಕಂಪನಿ ನಿಯಮಿತ ಇವರಿಂದ RR No.SDHT-50 ಸ್ಥಾವರದ ಕಲಬುರಗಿ ವಿಮಾನ್ನ ನಿಲ್ದಾಣದ ವಿದ್ಯುತ್ ಬಳಕೆಯು ಡಿಸೆಂಬರ್ 2021 ಅಂತ್ಯಕ್ಕೆ ಒಟ್ಟು ಮೊತ್ತ ರೂ.47,22,185/- ಗಳಾಗಿದ್ದು, ಸದರಿ ಮೊತ್ತವನ್ನು ಪಾವತಿಸುವಂತೆ ಕೋರಿರುತ್ತಾರೆ.

ಪುಟ 1 ಕ್ಕೆ

4. ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆದೇಶದಲ್ಲಿ 2021-22ನೇ ಆರ್ಥಿಕ ಸಾಲಿಗೆ ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಮುಂದುವರೆದ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅನುಮೋದನೆಯನ್ನು ನೀಡಿ ಆದೇಶಿಸಲಾಗಿದೆ. ಇದರಲ್ಲಿ ಲೆಕ್ಕ ಶೀರ್ಷಿಕೆ 3451-00-090-1-11-071 - Development of Minor Airports - Building Expenses ರಡಿ 100.00 ಲಕ್ಷಗಳನ್ನು ಒದಗಿಸಲಾಗಿದೆ.

5. ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಲೆಕ್ಕ ಶೀರ್ಷಿಕ್ಕೆ 3451-00-090-1-11-071 - "Development of Minor Airports - Building Expenses" ರಡಿ ಕಲಬುರಗಿ ವಿಮಾನ ನಿಲ್ದಾಣದ ವಿದ್ಯುತ್ ಬಿಲ್ಲಿನ ಪಾವತಿಗಾಗಿ ರೂ.125.75 ಲಕ್ಷಗಳ ಅನುದಾನವನ್ನು ಪೂರಕ ಅಂದಾಜು 2ನೇ ಕಂತಿನಲ್ಲಿ ಒದಗಿಸಲಾಗಿರುತ್ತದೆ. ಅದರಂತೆ, ಆರ್ಥಿಕ ಇಲಾಖೆಯು ಪೂರಕ ಅಂದಾಜಿನಲ್ಲಿ ಒದಗಿಸಿರುವ ಅನುದಾನವನ್ನು ಕಲಬುರಗಿ ವಿಮಾನ ನಿಲ್ದಾಣದ ವಿದ್ಯುತ್ ಬಿಲ್ ಪಾವತಿಸುವ ಸಲುವಾಗಿ ಬಳಸಿಕೊಳ್ಳಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ; ಮೂಅಇ 35 ರಾಅವಿ 2021**
**ಬೆಂಗಳೂರು ದಿನಾಂಕ: 21ನೇ ಮಾರ್ಚ್ 2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕಲಬುರಗಿ ವಿಮಾನ ನಿಲ್ದಾಣದ ವಿದ್ಯುತ್ ಬಳಕೆ ಬಿಲ್ ಪಾವತಿಸಲು ಲೆಕ್ಕ ಶೀರ್ಷಿಕೆ 3451-00-090-1-11-071 - "Development of Minor Airports Building Expenses" ರಡಿ ರೂ.1,25,75,000.00 ( ಒಂದು ಕೋಟಿ ಇಪ್ಪತ್ತೈದು ಲಕ್ಷದ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಅನುದಾನವನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ ನಿಗಮ ನಿಯಮಿತ ಇವರಿಗೆ ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

2. **ಷರತ್ತುಗಳು**

- ಈಗ ಬಿಡುಗಡೆ ಮಾಡಿರುವ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಕೆ ಮಾಡತಕ್ಕದ್ದು, ಹಾಗೂ ಇದೇ ಉದ್ದೇಶಕ್ಕೆ ಈಗಾಗಲೇ ವೆಚ್ಚ ಮಾಡಿದ್ದಲ್ಲಿ ಈಗ ಬಿಡುಗಡೆ ಮಾಡಿರುವ ಅನುದಾನವನ್ನು ಬಳಕೆ ಮಾಡುವಂತಿಲ್ಲ.
- ಬಿಡುಗಡೆ ಮಾಡಿರುವ ಅನುದಾನವನ್ನು ಕಲಬುರಗಿ ವಿಮಾನ ನಿಲ್ದಾಣದ ವಿದ್ಯುತ್ ಬಿಲ್‌ಗಳ ಪಾವತಿಸಲು ಮಾತ್ರ ಬಳಕೆ ಮಾಡತಕ್ಕದ್ದು.
- ಅನುದಾನ ಬಳಕೆ ಬಗ್ಗೆ ನಿಗಧಿತ ನಮೂನೆಯಲ್ಲಿ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

3. ಈ ಯೋಜನೆಗಾಗಿ 2021-22ನೇ ಸಾಲಿನ ಲೆಕ್ಕ ಶೀರ್ಷಿಕೆ 3451-00-090-1-11-071 - "Development of Minor Airports Building Expenses" ರಡಿ ಒದಗಿಸಲಾಗಿರುವ ಅನುದಾನದಿಂದ ಭರಿಸತಕ್ಕದ್ದು.

ಪುಟ 3ಕ್ಕೆ

4. ಈ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ., ಬೆಂಗಳೂರು ಇವರು ಪೇಯೀಸ್ ರಸೀದಿಯ ಮೂಲಕ ಸರ್ಕಾರದ ಅಧೀನ ಕಾರ್ಯದರ್ಶಿ-1 ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಇವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನೆ, ಬೆಂಗಳೂರು ಇಲ್ಲಿ ಸೆಳೆಯಲು ಅನುಮತಿಸಿದೆ.

5. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/1/ ಟಿಎಫ್‌ಪಿ/ 2021, ದಿನಾಂಕ 05/04/2021 ರಡಿ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಎನ್. ಕಲಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮೂಲಸೌಲಭ್ಯ ಅಭಿವೃದ್ಧಿ, ಬಂದರು
ಮತ್ತು ಒಳನಾಡು ಜಲಸಾರಿಗೆ ಇಲಾಖೆ,

ಗೆ:

1. ಪ್ರಧಾನ ಮಹಾಲೇಖಪಾಲರು (ಆಡಿಟ್-1,2,3A & E), ಪ್ರಧಾನ ಮಹಾಲೇಖಪಾಲರ ಕಛೇರಿ, ಎವಿಡಿ ಸೆಕ್ಷನ್, ಕೆ.ಪಿ.ಎಸ್.ಸಿ.ಕಚೇರಿ ಎದುರು, ಬೆಂಗಳೂರು,
2. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
3. ಆಯುಕ್ತರು, ಟಿ.ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು.
4. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು
5. ಯೋಜನಾ ನಿರ್ದೇಶಕರು, ಖಜಾನೆ-2, ಗಾಂಧಿನಗರ, ಬೆಂಗಳೂರು.
6. ಹಿರಿಯ ನಿರ್ದೇಶಕರು, ಯೋಜನೆ ಹಾಗೂ ಸಂಪನ್ಮೂಲ ವಿಭಾಗ, ಯೋಜನೆ ಕಾರ್ಯಕ್ರಮ, ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1,) ವಿಧಾನ ಸೌಧ, ಬೆಂಗಳೂರು.

ಪ್ರತಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ನಿರ್ದೇಶಕರು, ಪಿಪಿಪಿ ಕೋಶ, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ, ವೆಬ್ ಸೈಟ್ ನಲ್ಲಿ ಪ್ರಕಟಿಸಲು.
4. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.